# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಜಿ.ಶೋಭ, ಹಿಂದಿನ ಅಧ್ಯಕ್ಷರು, ಮನ್ನೇಕೋಟೆ ಗ್ರಾಮ ಪಂಚಾಯತಿ, ಚಿಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ಆ(9):ಮಗಾರಾಗ್ರಾಉಖಾಯೋ/ಸಿಆರ್-34/2019-20 ದಿನಾಂಕ:15.06.2019
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/42/2019-20, ದಿನಾಂಕ:05.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರು ಶ್ರೀಮತಿ ಜಿ.ಶೋಭ, ಹಿಂದಿನ ಅಧ್ಯಕ್ಷರು, ಮನ್ನೇಕೋಟೆ ಗ್ರಾಮ ಪಂಚಾಯತಿ, ಚಿಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ರವರಿಗೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ವಿಚಾರಣಾ ವರದಿಯಲ್ಲಿ, ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ಇವರು ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲುಕು, ಮನ್ನೇಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸಹಳ್ಳಿ ಗ್ರಾಮದಲ್ಲಿ ನಿರ್ವಹಿಸಿರುವ ಕಾಮಗಾರಿಯನ್ನು ಗುಣಮಟ್ಟದಿಂದ ನಿರ್ಮಾಣ ಮಾಡಿರುವುದಿಲ್ಲ. ಚೆಕ್ ಡ್ಯಾಂಗಳನ್ನು ಕೆರೆಯ ಅಂಗಳದಲ್ಲಿ ನಿರ್ಮಾಣ ಮಾಡಿರುತ್ತಾರೆ ಎಂಬ ದೂರಿನ ಪ್ರಕರಣಕ್ಕೆ ಸಂಬಂಧಿಸಿದಂತೆ, ಓಂಬುಡ್ಸ್‌ಮನ್, ಜಿಲ್ಲಾ ಪಂಚಾಯತ್, ಚಿತ್ರದುರ್ಗರವರು ತನಿಖಾ ವರದಿಯಲ್ಲಿ ಆದೇಶಿಸಿರುವಂತೆ, ತಪ್ಪಿತಸ್ಥರಾದ ಮನ್ನೇಕೋಟೆ ಗ್ರಾಮ ಪಂಚಾಯಿತಿ ಹಿಂದಿನ ಅಧ್ಯಕ್ಷರಾದ ಶ್ರೀಮತಿ ಜಿ.ಶೋಭರವರ ವಿರುದ್ಧ ದೂರನ್ನು ಸಲ್ಲಿಸಿರುತ್ತಾರೆ.

ಈ ಸಂಬಂಧ ಶ್ರೀಮತಿ ಜಿ.ಶೋಭರವರಿಗೆ ನೋಟೀಸ್ ನೀಡಿ ದಿನಾಂಕ:18.10.2019 ಹಾಗೂ 21.10.2019ರಲ್ಲಿ ವಿಚಾರಣೆ ಮಾಡಲಾಗಿರುತ್ತದೆ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನ್ನೇಕೋಟೆ ಗ್ರಾಮ ಪಂಚಾಯಿತರವರು ಈ ಕೆಳಕಂಡಂತೆ ಲಿಖಿತ ಹೇಳಿಕೆ ನೀಡಿರುತ್ತಾರೆ.

ಪಂಚಾಯಿತಿ ಅಭಿವೃದ್ದಿ ಅಧಿಕರಿ, ಮನ್ನೇಕೋಟೆ ಗ್ರಾಮ ಪಂಚಾಯಿತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆರವರು ಪತ್ರ ಸಂಖ್ಯೆ:ಗ್ರಾಪಂ.ಪ/ಆರ್-1/19-20 ದಿನಾಂಕ:02.11.2019ರಲ್ಲಿ ಮನ್ನೇಕೋಟೆ ಗ್ರಾಮ ಪಂಚಾಯಿತಿ ಹಿಂದಿನ ಅಧ್ಯಕ್ಷರಾದ ಶ್ರೀಮತಿ ಟಿ.ಶೋಭ ಇವರ ಕರ್ತವ್ಯದ ಅವಧಿಯಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸಹಳ್ಳಿ ಗ್ರಾಮದಲ್ಲಿ ನಿರ್ವಹಿಸಿರುವ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರುವುದಿಲ್ಲ ಹಾಗೂ ಚೆಕ್ ಡ್ಯಂಗಳನ್ನು ಕೆರೆ ಅಂಗಳದಲ್ಲಿ ನಿರ್ಮಾಣ ಮಾಡಿರುತ್ತಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಸದರಿಯವರಿಗೆ ರೂ.12,637/-ಗಳನ್ನು ದಂಡ ವಿಧಿಸಿ, ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಪಾವತಿಸಲು ಆದೇಶಿಸಲಾಗಿದರುವ ಸಂಬಂಧ ದಿ:31.10.2019ರಂದು ಶ್ರೀಮತಿ ಜಿ.ಶೋಭ, ಹಿಂದಿನ ಅಧ್ಯಕ್ಷರು, ಮನ್ನೇಕೋಟೆ ಗ್ರಾಮ ಪಂಚಾಯಿತಿ ಇವರು ಲೆಕ್ಕ ಶೀರ್ಷಿಕೆ ಎಂ.ಜಿ.ಎನ್.ಆರ್.ಇ.ಜಿ.ಎ ಬೆಂಗಳೂರು ರವರ ಹೆಸರಿಗೆ ಖಾತೆ ಸಂಖ್ಯೆ:64172115805ಕ್ಕೆ ರೂ.12,637/-ಗಳನ್ನು ಪಾವತಿಸಿರುವ ಚಲನ್ ಸಲ್ಲಿಸಿರುತ್ತಾರೆ. ಆದ ಕಾರಣ ಸದರಿಯವರ ವಿರುದ್ಧ ಇರುವ ದೂರು ಪ್ರಕರಣವನ್ನು ಮುಕ್ತಾಯಗೊಳಿಸಲು ಕೋರಿರುತ್ತಾರೆ.

ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲೂಕು, ಮನ್ನೇಕೋಟೆ ಗ್ರಾಮ ಪಂಚಾಯತಿ ಹಿಮದಿನ ಅಧ್ಯಕ್ಷರಾದ ಶ್ರೀಮತಿ ಜಿ.ಶೋಭರವರ ವಿರುದ್ಧ ಇರುವ ದೂರಿನ ಸಂಬಂಧ ಸದರಿಯವರಿಗೆ ನೋಟೀಸ್ ನೀಡಿ ದಿನಂಕ:18.10.2019 ಹಾಘೂ 21.10.2019ರಲ್ಲಿ ವಿಚಾರಣೆ ಮಾಡಲಾಗಿರುತ್ತದೆ. ಶ್ರೀಮತಿ ಜಿ.ಶೋಭರವರು ಸದರಿ ವಿಚಾರಣೆಗೆ ಹಾಜರಾಗಿ ರೂ.12,637/-ಗಳನ್ನು ಸರ್ಕಾರಕ್ಕೆ ಪಾವತಿಸುವುದಾಗಿ ಒಪ್ಪಿ ಅದರಂತೆ ಸರ್ಕಾರಕ್ಕೆ ಹಣ ಪಾವತಿಸಿ ಚಲನ್ ಅನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನ್ನೇಕೋಟೆ ಗ್ರಾಮ ಪಂಚಾಯತಿರವರ ಮೂಲಕ ಹಾಜರುಪಡಿಸಿರುತ್ತಾರೆ. ಆದರೆ, ಅವರ ಮೇಲಿರುವ ದೂರಿಗೆ ಸಂಬಂಧಿಸಿದಂತೆ, ಯಾವುದೇ ಲಿಖಿತ ಹೇಳಿಕೆಯನ್ನು ನೀಡಿರುವುದಿಲ್ಲ. ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಮನ್ನೇಕೋಟೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಹೊಸಹಳ್ಳಿ ಗ್ರಾಮದಲ್ಲಿ ನಿರ್ವಹಿಸಿರುವ ಕಾಮಗಾರಿ ಗುಣಮಟ್ಟದಿಂದ ಮಾಡಿರುವುದಿಲ್ಲ, ಚೆಕ್ ಡ್ಯಾಂಗಳನ್ನು ಕೆರೆಯ ಅಂಗಳದಲ್ಲಿ ಮಾಡಿರುತ್ತಾರೆ ಎಂಬ ಬಗ್ಗೆ ಓಂಬಡ್ಸ್ ಮನ್, ಜಿಲ್ಲಾ ಪಂಚಾಯತಿ ಚಿತ್ರದುರ್ಗರವರು ನೀಡಿರುವ ತನಿಖಾ ವರದಿಯಲ್ಲಿ ಕಂಡುಬಂದಿರುವುದರಿಂದ ಈ ಪ್ರಕರಣದಲ್ಲಿ ಶ್ರೀಮತಿ ಜಿ.ಶೋಭರವರು ಭಾಗಿಯಾಗಿರುವುದು ದೃಢಪಟ್ಟರುತ್ತದೆ. ಸದರಿಯವರು ಸರ್ಕಾರಿ ಅನುದಾನ ದುರ್ಬಳಕೆ, ಕರ್ತವ್ಯಲೋಪ ಮಾಡಿರುವುದು ದೃಢಪಟ್ಟಿರುತ್ತದೆ. ಆದ ಕಾರಣ, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣೆ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಜಿ.ಶೋಭ ಹಿಂದಿನ ಅಧ್ಯಕ್ಷರು, ಮನ್ನೇಕೋಟೆ ಗ್ರಾಮ ಪಂಚಾಯತಿ ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಸದಸ್ಯತ್ವದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1093 ಗ್ರಾಪಂಅ 2019 ಬೆಂಗಳೂರು, ದಿನಾಂಕ:07.01.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಜಿ.ಶೋಭ ಹಿಂದಿನ ಅಧ್ಯಕ್ಷರು, ಮನ್ನೇಕೋಟೆ ಗ್ರಾಮ ಪಂಚಾಯತಿ ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಕರ್ತವ್ಯದ ಅವಧಿಯಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸಹಳ್ಳಿ ಗ್ರಾಮದಲ್ಲಿ ನಿರ್ವಹಿಸಿರುವ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರುವುದಿಲ್ಲ ಆದುದರಿಂದ ರೂ.12,637/-ಗಳನ್ನು ಸರ್ಕಾರಕ್ಕೆ ಪಾವತಿಸುವುದಾಗಿ ಒಪ್ಪಿ ಅದರಂತೆ ಸರ್ಕಾರಕ್ಕೆ ಹಣ ಪಾವತಿಸಿ ಚಲನ್ ಅನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನ್ನೇಕೋಟೆ ಗ್ರಾಮ ಪಂಚಾಯತಿರವರ ಮೂಲಕ ಹಾಜರುಪಡಿಸಿರುತ್ತಾರೆ. ಆದರೆ

ದೂರಿಗೆ ಸಂಬಂಧಿಸಿದಂತೆ, ಯಾವುದೇ ಲಿಖಿತ ಹೇಳಿಕೆಯನ್ನು ನೀಡದೇ ಇರುವುದರಿಂದ ಅವರ ಆಪಾದನೆ ಸಾಭೀತಾಗಿರುತ್ತದೆ. ಆದುದರಿಂದ ಶ್ರೀಮತಿ ಜಿ.ಶೋಭ ಹಿಂದಿನ ಅಧ್ಯಕ್ಷರು, ಮನ್ನೇಕೋಟೆ ಗ್ರಾಮ ಪಂಚಾಯತಿ ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ) ರನ್ವಯ ಮನ್ನೇಕೋಟೆ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

7/1/2020
(ರಮೇಶ್ ಡಿ.ಓ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹೆಚ್. ರಸ್ತೆ, ಬೆಂಗಳೂರು.
2) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
5) ಶ್ರೀಮತಿ ಜಿ.ಶೋಭ ಹಿಂದಿನ ಅಧ್ಯಕ್ಷರು, ಮನ್ನೇಕೋಟೆ ಗ್ರಾಮ ಪಂಚಾಯತಿ ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ
6) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನ್ನೇಕೋಟೆ ಗ್ರಾಮ ಪಂಚಾಯತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಮಾನ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.